# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 277 | Pages. 2 | Date: 23-09-2025, TUESDAY | RNI NO: KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 277 – ಪುಟಗಳು : 2 | 23-09-2025 ಮಂಗಳವಾರ | Ph: 8762954248 | ದರ : ₹1


# ಸಮೀಕ್ಷೆಗಾಗಿ ಮನೆ ಮನೆಗೆ ಇಂದಿನಿಂದ ಶಿಕ್ಷಕರು

## ನಿಖರ ಮಾಹಿತಿ ನೀಡಲು ಅಧಿಕಾರಿಗಳ ಮನವಿ | ತುರ್ತು ಸ್ಪಂದನೆಗೆ ಸಹಾಯವಾಣಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ರಾಜ್ಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ (ಜಾತಿ ಗಣತಿ) ಸಮೀಕ್ಷೆಗೆ ಸಿದ್ಧತೆ ಮಾಡಿಕೊಂಡಿದ್ದು ಸೆ. 23ರ ಮಂಗಳವಾರದಿಂದ ಗಣತಿದಾರರು ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಸಮೀಕ್ಷೆಯ ಮೊದಲ ದಿನವಾದ ಸೋಮವಾರ ಸಿಬ್ಬಂದಿಗೆ ಕಿಟ್ ವಿತರಣೆ ಹಾಗೂ ಅಂತಿಮ ಹಂತದ ತರಬೇತಿ ನೀಡಲಾಯಿತು.

ಗಣತಿ ವೇಳೆ ಸಾರ್ವಜನಿಕರಿಗೆ ಯಾವುದೇ ಸಮಸ್ಯೆಯಾದರೂ ನೆರವಿಗಾಗಿ ಜಿಲ್ಲಾಡಳಿತ ಸಹಾಯವಾಣಿ ತೆರೆದಿದೆ. ಕಚೇರಿ ವೇಳೆಯಲ್ಲಿ ಬೆಳಿಗ್ಗೆ 10 ರಿಂದ ಸಂಜೆ 6ರ ವರೆಗೆ ದೂರವಾಣಿ ಸಂಖ್ಯೆ 08172-295108 ಇಲ್ಲಿಗೆ ಕರೆ ಮಾಡಬಹುದಾಗಿದೆ.

### ಸರಳ ಆ್ಯಪ್ ರಚನೆ

60 ಪ್ರಶ್ನೆಗಳನ್ನು ಒಳಗೊಂಡಿರುವ ಆ್ಯಪ್ ಅನ್ನು ಸರ್ಕಾರ ರಚಿಸಿದ್ದು ಆ ಮೂಲಕವೇ ಗಣತಿ ನಡೆಯಲಿದೆ. ಮಂಗಳವಾರ ಬೆಳಿಗ್ಗೆಯಿಂದ ಮನೆ ಮನೆಗೆ ಸಮೀಕ್ಷೆದಾರರು ಭೇಟಿ ನೀಡಿ ಮಾಹಿತಿ ಕಲೆ ಹಾಕಲಿದ್ದಾರೆ. ಈ ಹಿಂದೆ ನಡೆಸಿದ ಪರಿಶಿಷ್ಟ ಜಾತಿ ಸಮೀಕ್ಷೆಗೆ ಅಳವಡಿಸಿಕೊಂಡಿದ್ದ ಆ್ಯಪ್‌ಗಿಂತ ಪ್ರಸ್ತುತ ಆ್ಯಪ್ ಸರಳವಾಗಿದ್ದು ಶಿಕ್ಷಕರಿಗೆ ಸುಲಭವಾಗಿ ಅರ್ಥವಾಗಲಿದೆಯೆಂದು ಅಧಿಕಾರಿಗಳು ಹೇಳಿದ್ದಾರೆ. ಗಣತಿಗೆ ನಿಯೋಜನೆಗೊಂಡಿರುವ ಶಿಕ್ಷಕರು ಅದರ ಫಲಿತಾಂಶ ಗೊತ್ತಾಗಲು ಕಾರ್ಯಕ್ಷೇತ್ರಕ್ಕೆ ಭೇಟಿ ನೀಡಬೇಕೆಂದಿದ್ದಾರೆ.

ಪ್ರತಿ ಕುಟುಂಬಕ್ಕೆ ಭೇಟಿ ನೀಡಿ 60 ಪ್ರಶ್ನೆಗಳನ್ನು ಕೇಳಬೇಕು. ಒಬ್ಬ ಶಿಕ್ಷಕರಿಗೆ 140 ಮನೆ, ಮತ್ತೊಬ್ಬರಿಗೆ ಕೇವಲ 70, 100 ಹೀಗೆ ವಿಂಗಡಣೆ ಮಾಡಲಾಗಿದೆ. ಕೆಲವರಿಗೆ ಹೆಚ್ಚು ಮತ್ತೆ ಕೆಲವರಿಗೆ ಕಡಿಮೆ ಮನೆಗಳ ಗಣತಿಗೆ ಹಾಕಿದ್ದು ಗೊಂದಲಕ್ಕೆ ಕಾರಣವಾಗಿದೆ. ಆನ್‌ಲೈನ್‌ನಲ್ಲೇ ಸಮೀಕ್ಷೆ ಮಾಡಬೇಕಿರುವುದರಿಂದ ಆ್ಯಪ್ ಯಾವ ರೀತಿ ಸ್ಪಂದಿಸುತ್ತದೆಂಬುದು ಕುತೂಹಲ ಕೆರಳಿಸಿದೆ. ಸರ್ಕಾರ ಸೆ. 22 ರಿಂದ ಅ. 7ರ ವರೆಗೆ ಅವಕಾಶ ಕಲ್ಪಿಸಿದೆ. ಇಷ್ಟು ಕಡಿಮೆ ಅವಧಿಯಲ್ಲಿ ಪೂರ್ಣಗೊಳಿಸಲು ಸಾಧ್ಯವಿಲ್ಲವೆಂಬ ಮಾತುಗಳು ಕೇಳಿಬಂದಿವೆ.




### ನಿರುದ್ಯೋಗಿಗಳಿಗೆ ಅವಕಾಶವಿತ್ತು

ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿಗೆ ಶಿಕ್ಷಕರ ಬದಲಿಗೆ ಅರ್ಹ ಪದವೀಧರರನ್ನು ನೇಮಿಸಿದ್ದರೆ ಅಲ್ಪ ದುಡಿಮೆಯಾದರೂ ಆಗುತ್ತಿತ್ತು. ಶಿಕ್ಷಕರ ದಸರಾ ರಜೆ ಕಡಿತಗೊಳಿಸಿರುವುದು ಖಂಡನೀಯ. ಪದವಿ ಪೂರೈಸಿದ ಆಶಾ ಕಾರ್ಯಕರ್ತರು ಅಥವಾ ಗ್ರಾಮದದಲ್ಲಿ ಪದವಿ ಪಡೆದ ಯುವಕ-ಯುವತಿಯರನ್ನು ಬಳಸಿಕೊಂಡಿದ್ದರೆ ಅವರ ದುಡಿಮೆಗೆ ನೆರವಾಗುತ್ತಿತ್ತು ಎಂಬುದು ಶಿಕ್ಷಕರ ಅಭಿಪ್ರಾಯ. ಜಿಲ್ಲಾದ್ಯಂತ 5,37,325 ಕುಟುಂಬಗಳು ಸಮೀಕ್ಷೆಗೆ ಒಳಪಡಿಸಲಿವೆ. ಈಗಾಗಲೇ ಎಲ್ಲಾ ಮನೆಗಳಿಗೆ ಸೆಸ್ಕ್ ವತಿಯಿಂದ ಸ್ಟಿಕ್ಕರ್ ಹಾಗೂ ಜಿಯೋ ಟ್ಯಾಗ್ ಅಳವಡಿಸಲಾಗಿದೆ. ಸಮೀಕ್ಷೆಯಿಂದ ಯಾರೂ ಹೊರಗುಳಿಯಬಾರದೆಂದು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ.

### ದಿಕ್ಕು ತಪ್ಪಿಸುವ ಹುನ್ನಾರ

ಇಡೀ ಒಳಮೀಸಲಾತಿಯ ಹಂಚಿಕೆಯನ್ನು ದಿಕ್ಕು ತಪ್ಪಿಸಲು ಸರ್ಕಾರ ಹೊರಟಿದ್ದು, ಎಸ್ಸಿ ಕ್ರೈಸ್ತ ಜಾತಿಗಳನ್ನು ಸರ್ಕಾರ ಕೂಡಲೇ ಕೈ ಬಿಡಬೇಕು. ಇಲ್ಲವಾದರೆ ಎಲ್ಲ ಜಿಲ್ಲೆಗಳಲ್ಲಿ ದಲಿತರು ಬೀದಿಗಿಳಿಯಬೇಕಾಗುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಎಚ್ಚರಿಕೆ ನೀಡಿದರು.

ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಆ.23ರಂದು ಪತ್ರಿಕೆಗಳಲ್ಲಿ ಪ್ರಕಟಿಸಿದ ನಾಲ್ಕು ಪುಟಗಳ ಜಾಹೀರಾತಿನಲ್ಲಿ 1,400 ಜಾತಿಗಳ ಸಮೀಕ್ಷಾ ಪಟ್ಟಿ ಬಿಡುಗಡೆ ಮಾಡಿತ್ತು. ಅದರಲ್ಲಿ 48 ಹಿಂದು ಜಾತಿಗಳನ್ನು ಕ್ರಿಶ್ಚಿಯನ್ ಎಂದು ಗುರುತಿಸಲಾಗಿದ್ದು, ಅದರಲ್ಲಿ 15 ಪರಿಶಿಷ್ಟ ಜಾತಿ ಹಾಗೂ ಒಂದು ಪರಿಶಿಷ್ಟ ಪಂಗಡ (ವಾಲ್ಮೀಕಿ ಕ್ರಿಶ್ಚಿಯನ್) ಸೇರಿರುವುದು ಗಂಭೀರ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಸೋಮವಾರ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ರಾಜ್ಯಾದ್ಯಂತ ಹೋರಾಟಗಳು ತೀವ್ರಗೊಂಡ ನಂತರ ಆಯೋಗದ ಅಧ್ಯಕ್ಷರು 33 ಹಿಂದು ಜಾತಿಗಳ ಕ್ರಿಶ್ಚಿಯನ್ ಟ್ಯಾಗ್ ತೆಗೆದಿದ್ದಾರೆಂದು ಘೋಷಿಸಿದರು. ಆದರೆ, ಉಳಿದ 13 ದಲಿತ ಕ್ರಿಶ್ಚಿಯನ್ ಜಾತಿಗಳ ಬಗ್ಗೆ ಯಾವುದೇ ಅಧಿಕೃತ ಸ್ಪಷ್ಟನೆ ನೀಡದಿರುವುದನ್ನು ತೀವ್ರವಾಗಿ ವಿರೋಧಿಸುತ್ತೇವೆ ಎಂದರು.

ಆದಿ ಆಂಧ್ರ ಕ್ರಿಶ್ಚಿಯನ್, ಆದಿ ಕರ್ನಾಟಕ ಕ್ರಿಶ್ಚಿಯನ್, ಆದಿದ್ರಾವಿಡ ಕ್ರಿಶ್ಚಿಯನ್, ಬಂಜಾರ ಕ್ರಿಶ್ಚಿಯನ್, ಬುಡುಗ ಜಂಗಮ ಕ್ರಿಶ್ಚಿಯನ್, ಹೊಲೆಯ ಕ್ರಿಶ್ಚಿಯನ್, ಲಮಾಣಿ-ಲಂಬಾಣಿ ಕ್ರಿಶ್ಚಿಯನ್, ಮಾದಿಗ ಕ್ರಿಶ್ಚಿಯನ್, ಮಹಾರ್ ಕ್ರಿಶ್ಚಿಯನ್, ಮಾಲಾ ಕ್ರಿಶ್ಚಿಯನ್, ಪರಯ ಕ್ರಿಶ್ಚಿಯನ್, ವಡ್ಡ ಕ್ರಿಶ್ಚಿಯನ್ ಹಾಗೂ ವಾಲ್ಮೀಕಿ ಕ್ರಿಶ್ಚಿಯನ್ ಜಾತಿಗಳ ಕ್ರೈಸ್ತ ಟ್ಯಾಗ್ ತೆಗೆದ ಅಧಿಕೃತ ಪ್ರಕಟಣೆಯನ್ನು ಸರ್ಕಾರ ಕೂಡಲೇ ಹೊರಡಿಸಬೇಕು ಎಂದು ಆಗ್ರಹಿಸಿದರು.

ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿ ಕ್ರಿಶ್ಚಿಯನ್ ಜಾತಿಗಳನ್ನು ಸೇರಿಸುವುದು ಸಂವಿಧಾನ ವಿರೋಧಿ. ಸಂವಿಧಾನದ 341ನೇ ವಿಧಿಯ ವಿರುದ್ಧವಾಗಿ ಸಮೀಕ್ಷೆ ನಡೆಸಲಾಗುತ್ತಿದೆ. ಎರಡು ತಿಂಗಳ ಹಿಂದಷ್ಟೇ ನಾಗಮೋಹನ್ ದಾಸ್ ಆಯೋಗವು 150 ಕೋಟಿ ರೂಪಾಯಿ ವೆಚ್ಚದಲ್ಲಿ ಸಮಗ್ರ ಸಮೀಕ್ಷೆ ನಡೆಸಿತ್ತು. ಇದೀಗ ಮತ್ತೆ ಸಮೀಕ್ಷೆ ನಡೆಸುವುದು ಅನಗತ್ಯ.

ಸುದ್ದಿಗೋಷ್ಠಿಯಲ್ಲಿ ಶಾಸಕ ಎಚ್.ಕೆ. ಸುರೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಎಸ್.ಸಿ. ಮೋರ್ಚಾ ಅಧ್ಯಕ್ಷ ಎಸ್.ಡಿ. ಚಂದ್ರು, ಗಿರೀಶ್, ಚೇತನ್ ಇತರರು ಇದ್ದರು.

### ಹೊರಗಿನ ಬಿಎಲ್‌ಒಗಳ ನಿಯೋಜನೆ

ಜಾತಿ ಸಮೀಕ್ಷೆಗೆ ಆಯಾ ಭಾಗದ ಶಿಕ್ಷಕರನ್ನು ಬಿಎಲ್‌ಒಗಳನ್ನಾಗಿ ನಿಯೋಜಿಸಲಾಗುತ್ತದೆ. ಅವರು ಅದೇ ಭಾಗದಲ್ಲಿ ಕೆಲವು ವರ್ಷಗಳಿಂದ ಶಿಕ್ಷಕರಾಗಿ ಕೆಲಸ ಮಾಡಿರುವುದರಿಂದ ಗ್ರಾಮದ ಮನೆ ವಿಳಾಸ, ಕುಟುಂಬಸ್ಥರ ಪೂರ್ವಾಪರ ಎಲ್ಲವೂ ತಿಳಿದಿರುತ್ತದೆ. ಆದರೆ ಸದ್ಯದ ಸಮೀಕ್ಷೆಗೆ ನಿಯೋಜನೆಗೆ ಬೇರೆ ಬಿಎಲ್‌ಒಗಳ ನಿಯೋಜಿಸಿದ್ದು ಗೊಂದಲಕ್ಕೆ ಎಡೆಮಾಡಿಕೊಟ್ಟಿದೆ. ಗಣತಿದಾರರು ತಾವು ಭೇಟಿ ನೀಡುವ ಸ್ಥಳದ ಲೋಕೇಶನ್ ಸಹ ಆ್ಯಪ್ ತೋರಿಸುವುದರಿಂದ ಸಮಸ್ಯೆಯಾಗುವುದಿಲ್ಲವೆಂದು ಅಧಿಕಾರಿಗಳು ಹೇಳುತ್ತಾರೆ. ಜೊತೆಗೆ ನೆಟ್‌ವರ್ಕ್ ಇಲ್ಲದ ಸ್ಥಳಗಳಲ್ಲಿ ಹೇಗೆ ತಲುಪುವುದು ಎಂಬ ಪ್ರಶ್ನೆಯು ಶಿಕ್ಷಕರನ್ನು ಕಾಡುತ್ತಿದೆ.

## ಶಿಲುಬೆ ಬೆಟ್ಟದಲ್ಲಿ ಗಣಿಗಾರಿಕೆ ಸ್ಥಗಿತಕ್ಕೆ ಆಗ್ರಹ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಆಲೂರು ತಾಲ್ಲೂಕಿನ ಕೆಂಚಮ್ಮನ ಹೊಸಕೋಟೆ ಹೋಬಳಿ ಹೊಸಮಠ ಗ್ರಾಮದ ಶಿಲುಬೆ ಬೆಟ್ಟದಲ್ಲಿ ಗಣಿಗಾರಿಕೆಗೆ ಅವಕಾಶ ನೀಡದಂತೆ ರೈತ ಸಂಘ, ಕ್ರೈಸ್ತ ಧರ್ಮ ಗುರುಗಳು ಮತ್ತು ಕರ್ನಾಟಕ ರಕ್ಷಣಾ ವೇದಿಕೆ ನೇತೃತ್ವದಲ್ಲಿ ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ಚಿಕ್ಕಮಗಳೂರಿನ ಜಯಬಸವಾನಂದ ಸ್ವಾಮೀಜಿ ಮಾತನಾಡಿ, ಶಿಲುಬೆ ಬೆಟ್ಟದಲ್ಲಿ ಗಣಿಗಾರಿಕೆಯಿಂದ ಗ್ರಾಮಸ್ಥರು ಅನೇಕ ತೊಂದರೆ ಅನುಭವಿಸುತ್ತಿದ್ದಾರೆ. ಭಾರಿ ವಾಹನಗಳ ಸಂಚಾರದಿಂದ ರಸ್ತೆಗಳು ಹಾಳಾಗಿದೆ. ಗಣಿಗಾರಿಕೆಗೆ ಬಳಸುವ ಸ್ಫೋಟಕದಿಂದ ಕಾಡು ಪ್ರಾಣಿಗಳು, ಕಾಡಾನೆಗಳು ಕೃಷಿ ಭೂಮಿಯನ್ನು ಹಾಳು ಮಾಡುತ್ತಿವೆ. ಆದ್ದರಿಂದ ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಹಿಂದೆ ಗಣಿಗಾರಿಕೆ ಸ್ಥಗಿತಕ್ಕೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ್ ಪಟೇಲ್ ಅವರು ಪ್ರತಿಭಟನೆ ಮಾಡಿದ್ದರು.ಆದರೆ, ಅವರ ವಿರುದ್ಧ ಜಾತಿನಿಂದನೆ ಆರೋಪ ಹೊರಿಸಿ ಪ್ರಕರಣ ದಾಖಲಿಸಿರುವುದನ್ನು ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು.

ರೈತ ಮುಖಂಡ ಆನೆಕೆರೆ ರವಿ ಮಾತನಾಡಿ, ಹಲವು ದಿನಗಳಿಂದ ಶಿಲುಬೆ ಬೆಟ್ಟದಲ್ಲಿ ಗಣಿಗಾರಿಕೆ ಸ್ಥಗಿತ ಮಾಡುವಂತೆ ಪ್ರತಿಭಟನೆ ಮಾಡಲಾಗುತ್ತಿದೆ. ಆದರೆ, ಕೆಲವು ಹಿತಾಸಕ್ತಿಗಳು ಇಲ್ಲಸಲ್ಲದ ಆರೋಪ ಮಾಡಿ ಹೋರಾಟಗಾರರ ಮೇಲೆ ಪ್ರಕರಣ ದಾಖಲು ಮಾಡುತ್ತಿರುವುದು ಸರಿಯಲ್ಲ. ಕೂಡಲೇ ಜಿಲ್ಲಾಡಳಿತ ಎಚ್ಚೆತ್ತುಕೊಂಡು ಗಣಿಗಾರಿಕೆಯಿಂದ ಆಗುತ್ತಿರುವ ತೊಂದರೆಯನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ಗಣಿಗಾರಿಕೆ ಸ್ಥಗಿತ ಮಾಡುವಲ್ಲಿ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಾಬು, ಮಂಜುನಾಥ್, ಮಹಮದ್ ಸಾಧಿಕ್, ಸುಧಾ ಗಿರೀಶ್, ರಂಗಮ್ಮ, ಪವಿತ್ರಾ, ಕುಮಾರ್, ಜಯಣ್ಣ, ಶಿವರಾಮೇಗೌಡ, ಕಮಲಮ್ಮ, ಧರ್ಮೇಗೌಡ, ಕಾಳಯ್ಯ ಇತರರಿದ್ದರು.

## ಹಿರೀಸಾವೆಯಲ್ಲಿ ದಸರಾ ಉತ್ಸವಕ್ಕೆ ಗಣ್ಯರಿಂದ ಚಾಲನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಹಿರೀಸಾವೆ ಗ್ರಾಮದೇವತೆ ಶ್ರೀ ಚೌಡೇಶ್ವರಿ ದೇವಿಯ ನವರಾತ್ರಿ ಆಚರಣೆ ಮತ್ತು ದಸರಾ ಮಹೋತ್ಸವಕ್ಕೆ ಉಯ್ಯಾಲೆ ಕಂಬದ ಬಳಿ ಸೋಮವಾರ ಚಾಲನೆ ನೀಡಲಾಯಿತು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಗ್ರಾಮ ಸಾವಿರಾರು ವರ್ಷಗಳ ಇತಿಹಾಸ ಹೊಂದಿದೆ ಎನ್ನಲು ಉಯ್ಯಾಲೆ ಕಂಬವೇ ಸಾಕ್ಷಿಯಾಗಿದೆ. ಗ್ರಾಮದ ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳು ಮತ್ತು ಅಭಿವೃದ್ಧಿಗೆ ಸಹಕಾರ ನೀಡುವೆ. ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಈ ವರ್ಷ ಮಳೆ ಕೊರತೆಯಿಂದ ರಾಗಿ, ತೆಂಗು ಸೇರಿದಂತೆ ಹಲವುಯ ಬೆಳೆಗಳಿಗೆ ತೊಂದರೆಯಾಗಿದೆ. ಈ ಬಗ್ಗೆ ಸರ್ಕಾರ ಗಮನಸೆಳೆಯುವುದಾಗಿ ಎಂದು ತಿಳಿಸಿದರು. ಕಾಂಗ್ರೆಸ್ ಮುಖಂಡ ಎಂ.ಎ.ಗೋಪಾಲಸ್ವಾಮಿ ಮಾತನಾಡಿ, ದಸರಾ ಉತ್ಸವವು ದೇಶದ ಹಿಂದು ಧಾರ್ಮಿಕ ಆಚರಣೆ ಮತ್ತು ಸಾಂಸ್ಕೃತಿಕದ ಸಂಕೇತವಾಗಿದೆ. ಭಕ್ತಿ ಭಾವದಿಂದ ಸಪ್ತಮಾತೃಕೆಯ ದೇವಿಯರ ಪೂಜೆ ಮಾಡಬೇಕು ಎಂದರು. ಕರ್ನಾಟಕ ವಿದ್ಯುತ್ ಕಾರ್ಖಾನೆಯ ಅಧ್ಯಕ್ಷ ಎಚ್.ಸಿ.ಲಲಿತ ರಾಘವ್ ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷವು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ನವರಾತ್ರಿ ಆಚರಣೆ ನಡೆಯಲಿದೆ. ಅದ್ದೂರಿ ದಸರಾ ಯಶಸ್ವಿಗೆ ಗ್ರಾಮದ ಎಲ್ಲರು ಸಹಕಾರ ನೀಡಬೇಕು ಎಂದು ಧರ್ಮದರ್ಶಿ ಎಚ್.ವಿ. ಫಣೀಶ್ ಹೇಳಿದರು. ನವರಾತ್ರಿ ಪ್ರಾರಂಭದ ಅಂಗವಾಗಿ ಇಲ್ಲಿನ ಚೌಡೇಶ್ವರಿ ದೇವಿಗೆ ಮೊದಲ ದಿನ ವಿಶೇಷ ಪೂಜೆಗಳನ್ನು ಸಲ್ಲಿಸಲಾಯಿತು. ಬಿಎಲ್‌ಡಿಬಿ ಅಧ್ಯಕ್ಷ ಬಿ.ಎನ್. ಮಂಜುನಾಥ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜಯಮ್ಮ ಬೋರಯ್ಯ, ಸದಸ್ಯರಾದ ಮಾರುತಿ ಮಂಜುನಾಥ್, ಬೋರಣ್ಣ, ಚೇತು, ಪಿಡಿಓ ಸತೀಶ್, ಪಿಎಸಿಸಿಬಿ ಅಧ್ಯಕ್ಷ ಮಹೇಶ್, ಸೊಸೈಟಿ ಹರೀಶ್, ದೇವಸ್ಥಾನ ಮುಖ್ಯಸ್ಥ ಅನಂತರಾಮಯ್ಯ, ಗ್ರಾಮದ ಮುಖಂಡರಾದ ಅರಳಿಮರದ ಕುಮಾರ್, ರಾಮಕೃಷ್ಣ, ಎಚ್.ಎಸ್. ರವಿಕುಮಾರ್, ಬಾಲಕೃಷ್ಣ, ಉದಯಕುಮಾರ್, ಎಚ್.ಎಸ್. ಶ್ರೀಧರ್ ಇತರರಿದ್ದರು.

## ಬಿಜೆಪಿ ಮುಖಂಡ ರವಿ ಬಂಧನ-ಬಿಡುಗಡೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ಸಾಹಿತಿ ಬಾನು ಮುಷ್ತಾಕ್ ಅವರಿಂದ ನಾಡಹಬ್ಬ ಮೈಸೂರು ದಸರಾ ಉದ್ಘಾಟನೆ ವಿರೋಧಿಸಿ ಪ್ರತಿಭಟನೆ ನಡೆಸುವುದಾಗಿ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹಾಕಿದ್ದ ತಾಲ್ಲೂಕು ಬಿಜೆಪಿ ಮಾಜಿ ಅಧ್ಯಕ್ಷ ಡಿ.ಎಂ. ರವಿ ಅವರನ್ನು ಸೋಮವಾರ ಶ್ರವಣಬೆಳಗೊಳ ಠಾಣೆ ಪೊಲೀಸರು ಬಂಧಿಸಿ ನಂತರ ಬಿಡುಗಡೆಗೊಳಿಸಿದರು.

ಬಾನು ಮುಷ್ತಾಕ್ ಅವರು ಭುವನೇಶ್ವರಿ ಕುರಿತು ನೀಡಿದ ಹೇಳಿಕೆ ಕನ್ನಡಕ್ಕೆ ಅಪಮಾನ ಮಾಡಿದೆ. ಹಿಂದು ಸಂಪ್ರದಾಯದ ಮೇಲೆ ನಂಬಿಕೆ ಇಲ್ಲದ ಅವರು ದಸರಾ ಉದ್ಘಾಟಿಸಬಾರದು. ಸರ್ಕಾರದ ನಿರ್ಧಾರ ಖಂಡಿಸಿ ಮೈಸೂರಿನಲ್ಲಿ ಪ್ರತಿಭಟನೆ ನಡೆಸುವುದಾಗಿ ರವಿ ಹೇಳಿಕೊಂಡಿದ್ದರು. ಶಾಂತಿ ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಅವರನ್ನು ಬಂಧಿಸಿ ನಂತರ ಬಿಡುಗಡೆ ಮಾಡಲಾಯಿತು.

## ಬಿ.ಡಿ. ಶ್ರೀಧರ್‌ಗೆ ಪಿಹೆಚ್.ಡಿ. ಪ್ರದಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**



ಹಾಸನ: ಬೆಂಗಳೂರಿನ ಎಪಿಎಸ್ ಇಂಜಿನಿಯರಿಂಗ್ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಬಿ.ಡಿ. ಶ್ರೀಧರ್ ಅವರು ಆಂಧ್ರಪ್ರದೇಶದ ಕುಪ್ಪಂ ದ್ರಾವಿಡಿಯನ್ ವಿಶ್ವವಿದ್ಯಾನಿಲಯದಿಂದ ಪಿಹೆಚ್.ಡಿ. ಪದವಿಗೆ ಭಾಜನರಾಗಿದ್ದಾರೆ.

ವೆಲ್ಲೂರು ವೋಹೀಸ್ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಡಾ. ಜೆ. ವಿಕ್ಟರ್ ಧನರಾಜ್ ಅವರ ಮಾರ್ಗದರ್ಶನದಲ್ಲಿ ಮಂಡಿಸಿದ ಟಿಸೋಷಿಯಲ್ ಫಿಲಾಸಫಿ ಆಫ್ ಅಥ್ಲೆಟಿಕ್ಸ್ ಒರಿಜಿನ್ಸ್ ಅಂಡ್ ಆಸ್ಪೆಕ್ಟ್ಸ್ ಆಫ್ ಒಲಂಪಿಸಮ್ ಸ್ಪೋರ್ಟ್ಸ್ ಅಂಡ್ ಫಿಸಿಕಲ್ ಎಜುಕೇಶನ್, ಫಾಸ್ಟ್, ಪ್ರಸೆಂಟ್, ಫ್ಯೂಚರ್ ಎಂಬ ಪ್ರಬಂಧಕ್ಕೆ ಡಾಕ್ಟರೇಟ್ ದೊರೆತಿದೆ.

ಬಿ.ಡಿ. ಶ್ರೀಧರ್ ಅವರು ತುಮಕೂರು ಜಿಲ್ಲೆ ತಿಪಟೂರು ತಾಲ್ಲೂಕು ಬನ್ನಿಹಳ್ಳಿ ಗ್ರಾಮದ ಅಂಗನವಾಡಿ ಕಾರ್ಯಕರ್ತೆ ಯಶೋಧಮ್ಮ ಮತ್ತು ದಿ. ಧರ್ಮಪ್ಪ ಅವರ ಪುತ್ರರು. ಬಿ.ಡಿ. ಶ್ರೀಧರ ಅವರ ಸಾಧನೆಗೆ ನಿವೃತ್ತ ಸಂಚಾರ ನಿಯಂತ್ರಕ ಎನ್.ಆರ್. ವೀರಭದ್ರಪ್ಪ ಹಾಗು ಕುಟುಂಬಸ್ಥರಾದ ದೀಪಾ ನವೀಶ್, ಚೈತ್ರಾ ಸಂದೇಶ್, ಕನ್ನಡ ಪೋಸ್ಟ್ ಪತ್ರಿಕೆ ಪ್ರಧಾನ ಸಂಪಾದಕ ಮಂಜು ಬನವಾಸೆ, ಶ್ವೇತಾ ಮಂಜುನಾಥ ಮತ್ತು ಬಂಧು ಮಿತ್ರರು, ಸ್ನೇಹಿತರು ಅಭಿನಂದನೆ ಸಲ್ಲಿಸಿದ್ದಾರೆ.

## ಸೆ. 25 ರಂದು ಪಾಲಿಕೆ ಸಾಮಾನ್ಯ ಸಭೆ

ಹಾಸನ: ಮಹಾನಗರ ಪಾಲಿಕೆಯ ಮೇಯರ್ ಗಿರೀಶ್ ಚನ್ನವೀರಪ್ಪ ಅವರ ಅಧ್ಯಕ್ಷತೆಯಲ್ಲಿ ರಾಷ್ಟ್ರಕವಿ ಕುವೆಂಪು ಸಭಾಂಗಣದಲ್ಲಿ ಸೆ.25ರ ಬೆಳಿಗ್ಗೆ 11 ಗಂಟೆಗೆ ಸಾಮಾನ್ಯ ಸಭೆ ಆಯೋಜಿಸಲಾಗಿದೆ ಎಂದು ಪಾಲಿಕೆಯ ಆಯುಕ್ತ ಆರ್. ಕೃಷ್ಣಮೂರ್ತಿ ತಿಳಿಸಿದ್ದಾರೆ.

## ಮಾರುಕಟ್ಟೆ ಹರಾಜು: ಪ್ರಳಯವಾದರೂ ರಾಜಿ ಇಲ್ಲವೆಂದ ಪ್ರೀತಂ ಗೌಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ನಗರದ ಕಟ್ಟಿನಕೆರೆ ಮಾರುಕಟ್ಟೆಯ ಮೂಲ ವ್ಯಾಪಾರಿಗಳಿಗೆ ಅನ್ಯಾಯವಾಗಲು ಯಾವ ಕಾರಣಕ್ಕೂ ಬಿಡುವುದಿಲ್ಲ, ಜಗತ್ತು ಪ್ರಳಯವಾದರೂ ಈ ವಿಚಾರದಲ್ಲಿ ರಾಜಿ ಆಗುವುದಿಲ್ಲ ಎಂದು ಮಾಜಿ ಶಾಸಕ ಪ್ರೀತಂ ಗೌಡ ಹೇಳಿದರು.

ಸೋಮವಾರ ಸಂಜೆ ಕಟ್ಟಿನಕೆರೆ ಮಾರುಕಟ್ಟೆಗೆ ಭೇಟಿ ನೀಡಿದ ಅವರು ಮಾತನಾಡಿ, ಮಳಿಗೆ ಹಂಚಿಕೆ ಇ-ಹರಾಜು ಆಗಬೇಕು ಹಾಗೂ ಮೂಲ ವ್ಯಾಪಾರಿಗಳಿಗೆ ಸಿಗಬೇಕೆನ್ನುವುದು ನನ್ನ ಆದ್ಯತೆ. ಅದಕ್ಕಾಗಿ ಶಾಸಕ ಹೆಚ್.ಪಿ. ಸ್ವರೂಪ್ ಅವರ ಮನೆಗೆ ಭೇಟಿ ನೀಡಲು ಸಿದ್ದನಿದ್ದೇನೆ. ಈ ವಿಚಾರದಲ್ಲಿ ಜಗತ್ತು ಪ್ರಳಯವಾದರೂ ಬಡವರಿಗೆ ತೊಂದರೆಯಾಗಲು ಬಿಡುವುದಿಲ್ಲ.

ಮಾರುಕಟ್ಟೆಯಲ್ಲಿ 487 ಅಂಡಿಗಳಿದ್ದು ಇ-ಹರಾಜು ಆಗಬೇಕೆನ್ನುವುದು ವ್ಯಾಪಾರಿಗಳ ಬೇಡಿಕೆಯಾಗಿದೆ. ಮಂಗಳವಾರ ಬೆಳಿಗ್ಗೆ 10 ಗಂಟೆ ವೇಳೆಗೆ ಸಮಸ್ಯೆ ನಿವಾರಣೆಯಾಗುತ್ತದೆ ಎಂದರು.



ನಾನು ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಎಂದು ಹೇಳಿಕೊಂಡು ಬಂದಿಲ್ಲ. ನನ್ನನ್ನು ಪ್ರೀತಿ ಮಾಡುವವರು ಇರುವಷ್ಟು ದ್ವೇಷಿಸುವವರೂ ಇದ್ದಾರೆ. ನನಗೆ ಅದು ಯಾವತ್ತಿಗೂ ಮುಖ್ಯವಾಗುವುದಿಲ್ಲ. ಹತ್ತಾರು ವರ್ಷಗಳಿಂದ ಇಲ್ಲಿಯೇ ಜೀವನ ಕಟ್ಟಿಕೊಂಡಿರುವವರಿಗೆ ಅನ್ಯಾಯವಾಗಬಾರದು. ನಾನು ಮತ ಕೇಳಲು ಇಲ್ಲಿಗೆ ಬಂದಿಲ್ಲ. ಅದಕ್ಕೆ ಇನ್ನೂ ಮೂರು ವರ್ಷ ಸಮಯವಿದೆ ಎಂದರು.

ಹರಾಜು ಪ್ರಕ್ರಿಯೆಯಲ್ಲಿ ವ್ಯಾಪಾರಿಗಳಿಗೆ ಅನ್ಯಾಯವಾಗದಂತೆ ಕ್ರಮ ವಹಿಸಲು ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ. ಸ್ವರೂಪ್ ಅವರೊಂದಿಗೆ ಮಾತನಾಡುತ್ತೇನೆ. ನೀವು ಒಪ್ಪಿದರೆ ಈಗಲೇ ಶಾಸಕರ ಮನೆಗೆ ಬರುತ್ತೇನೆ. ಈ ನಿಟ್ಟಿನಲ್ಲಿ ರಾಜಿಯಾಗುವ ಪ್ರಶ್ನೆಯೇ ಇಲ್ಲ. ಜಗತ್ತು ಪ್ರಳಯ ಆದರೂ ನಿಮ್ಮ ಜೊತೆ ಇರುತ್ತೇನೆ. ನಾನು ಯಾವುದೇ ಮುಲಾಜಿಗೆ ಒಳಗಾಗುವುದಿಲ್ಲ. ಇಲ್ಲಿ ಮಳಿಗೆ ಬೇಕೆಂದು ಹೊರಗಡೆಯವರು ಬಂದರೆ ಅವರಿಗೆ ಕಾಫಿ, ಟೀ ಕೊಟ್ಟು ಸಮಾಧಾನ ಮಾಡಿಸೋಣ, ಅದಕ್ಕೆ ಒಪ್ಪದಿದ್ದರೆ ಪಕ್ಕಕ್ಕೆ ಕರೆದುಕೊಂಡು ಹೇಳುವ ಕೆಲಸ ಮಾಡುತ್ತೇನೆಂದು ಎಚ್ಚರಿಕೆ ನೀಡಿದರು.

ಸಂಸದ, ಶಾಸಕರಿಗಿಂತ ದೊಡ್ಡವರು ಯಾರೂ ಇಲ್ಲ. ಮೂಲ ವ್ಯಾಪಾರಿಗಳಿಗೆ ಅನುಕೂಲವಾಗಲಿ ಎಂಬುದಷ್ಟೇ ನನ್ನ ಉದ್ದೇಶ. ಇದರಲ್ಲಿ ರಾಜಕೀಯ ಬೆರೆಸುವ ಅವಶ್ಯಕತೆಯಿಲ್ಲ ಎಂದರು.

ಶಾಸಕ ಸಿಮೆಂಟ್ ಮಂಜು, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಹಾಗೂ ಬಿಜೆಪಿ ಮುಖಂಡರಿದ್ದರು.

## ಅಧಿಕಾರಕ್ಕಿಂತ ಮಾಡುವ ಕೆಲಸ ಶಾಶ್ವತ: ಸಿಮೆಂಟ್ ಮಂಜು



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಸಕಲೇಶಪುರ: ಅಧಿಕಾರ ಶಾಶ್ವತವಲ್ಲ. ನಾವು ಮಾಡುವ ಅಭಿವೃದ್ಧಿ ಕೆಲಸಗಳು ಅಜರಾಮರವಾಗಿರುತ್ತವೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ರಾಜಬೀದಿಯ ಎಲ್.ಎಂ. ರಸ್ತೆಯ ವೃತ್ತದಲ್ಲಿ ಸೋಮವಾರ ನೂತನ ಕುಡಿಯುವ ನೀರಿನ ಘಟಕಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇಂದು ಎ.ಕೆ. ಸಾಗರ್ ವೃತ್ತದಲ್ಲಿ ಧ್ವಜಕಂಬ ಹಾಗೂ ಸಾರ್ವಜನಿಕರಿಗಾಗಿ ಕುಡಿಯುವ ನೀರಿನ ಘಟಕ ಸ್ಥಾಪನೆಯಾಗಿದೆ. ಇದು ಕೇವಲ ಅಭಿವೃದ್ಧಿ ಕೆಲಸವಲ್ಲ, ಸ್ಥಳೀಯ ವರ್ತಕರು ಹಾಗೂ ಸಂಘಟನೆಗಳ ಹೋರಾಟದ ಪ್ರತಿಫಲವೂ ಹೌದು ಎಂದು ಹೇಳಿದರು.

ಹುಟ್ಟಿದ ತಾಲ್ಲೂಕಿನಲ್ಲಿ ಒಳ್ಳೆಯ ಕೆಲಸ ಮಾಡಲು ಪ್ರತಿಯೊಬ್ಬರೂ ಬದ್ಧರಾಗಿರಬೇಕು. ನಗರದ ಶುದ್ಧತೆಯಿಂದಲೇ ಸಕಲೇಶಪುರ ಬೆಳೆದು ನಿಲ್ಲಬಹುದು. ಜನಪ್ರತಿನಿಧಿಗಳು ಹಾಗೂ ಸಂಘ ಸಂಸ್ಥೆಗಳ ಮುಂದಾಳತ್ವದಿಂದ ಮಾತ್ರ ಅಭಿವೃದ್ಧಿ ಪಥದಲ್ಲಿ ಸಾಗಲು ಸಾಧ್ಯ. ದೇಶ ಸುಭಿಕ್ಷೆಯಾದರೆ ರಾಜ್ಯ ಸಮೃದ್ಧವಾಗಿರುತ್ತದೆ. ಸಾರ್ವಜನಿಕರ ಅನುಕೂಲಕ್ಕೆ ಮಾಡುವ ಪ್ರತಿಯೊಂದು ಕೆಲಸ ಮಾಣಿಕ್ಯದಂತಿದೆ. ಅಧಿಕಾರ ಯಾರಿಗೂ ಶಾಶ್ವತವಲ್ಲ. ಅಧಿಕಾರಾವಧಿಯಲ್ಲಿ ತಾಲ್ಲೂಕಿನ ಬೆಳವಣಿಗೆಗೆ ಪ್ರಾಮುಖ್ಯತೆ ನೀಡುತ್ತೇನೆಂದರು.

ಪುರಸಭಾ ಸದಸ್ಯರಾದ ಸರಿತಾ ಗಿರೀಶ್, ಇಸ್ರಾರ್, ವನಜಾಕ್ಷಿ, ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಕರವೇ ಅಧ್ಯಕ್ಷ ರಮೇಶ್ ಪೂಜಾರಿ, ವೀರಯೋಧ ಎ.ಕೆ. ಸಾಗರ್ ಸಂಘದ ಅಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷ ಜಮೀಲ್, ಕಾರ್ಯದರ್ಶಿ ಜಗದೀಶ್, ಪದಾಧಿಕಾರಿಗಳಾದ ಸಲೀಂ, ಚಿಂಟೂ ಹಾಗೂ ಕಾರ್ಯನಿರತ ಪತ್ರಕರ್ತ ಸಂಘದ ಅಧ್ಯಕ್ಷ ಜೈ ಭೀಮ್ ಮಂಜು ಇತರರಿದ್ದರು.

# ಬಸವಣ್ಣನ ತತ್ತ್ವಾದರ್ಶಗಳ ಪರಿಪಾಲನೆಯಾಗಲಿ

## ಹಾಸನದಲ್ಲಿ ಬಸವ ಸಂಸ್ಕೃತಿ ಅಭಿಯಾನ | ವಿದ್ಯಾರ್ಥಿಗಳೊಂದಿಗೆ ಸಂವಾದ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮನುಷ್ಯನ ದೇಹವೇ ದೇವಾಲಯ, ಶಿರವೇ ಕಳಸ. ಈ ಭಾವನೆಗೆ ಜೀವ ತುಂಬಿದವರು ಬಸವಣ್ಣ ಎಂದು ಗದಗದ ಯಡಿಯೂರು ಶ್ರೀ ತೊಂಟದರ್ಯ ಸಂಸ್ಥಾನ ಮಠದ ಮಠಾಧೀಶ ಶ್ರೀ ಡಾ.ತೊಂಟದ ಸಿದ್ದರಾಮ ಸ್ವಾಮೀಜಿ ಹೇಳಿದರು.

ನಗರದ ಹಾಸನಾಂಬ ಕಲಾಕ್ಷೇತ್ರ ಭಾನುವಾರ ನಡೆದ ವಿಶ್ವಗುರು ಬಸವಣ್ಣ ಅವರನ್ನು ಸಾಂಸ್ಕೃತಿಕ ನಾಯಕನೆಂದು ರಾಜ್ಯ ಸರ್ಕಾರ ಘೋಷಿಸಿ ಒಂದು ವರ್ಷ ಪೂರೈಸಿದ ಹಿನ್ನೆಲೆ ಬಸವ ಸಂಸ್ಕೃತಿ ಅಭಿಯಾನ ರಥಯಾತ್ರೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದದಲ್ಲಿ ಮಾತನಾಡಿದರು.

ದೇವಾಲಯಕ್ಕೆ ಹೋಗುವುದೇ ಧರ್ಮವಲ್ಲ, ಇಷ್ಟಲಿಂಗವೇ ಶಾಶ್ವತ ದೇವಾಲಯ. ಪೂಜಾರಿ ಮಾಡಿದ ಪೂಜೆಯ ಬದಲು ಪ್ರತಿಯೊಬ್ಬರೂ ತಾವೇ ಮಾಡುವ ಪೂಜೆಯೇ ನಿಜವಾದ ಧರ್ಮಾಚರಣೆ ಇದನ್ನು ಬಸವಣ್ಣನವರು ಕೊಟ್ಟ ಸಂದೇಶ ಎಂದು ಹೇಳಿದರು.

ದೇಹವೇ ದೇಗುಲವಿದೆ. ಶಿರವೇ ಒಂದು ಕಳಸ, ಈ ಪ್ರಚಾರಕ್ಕಾಗಿಯೇ ಬಸವ ಸಂಸ್ಕೃತಿಯ ಅಧ್ಯಯನ ಹೊರಟಿದೆ ಎಂಬುದನ್ನು ತಿಳಿದುಕೊಳ್ಳಬೇಕು. ನಾವು ಹೆಚ್ಚೆಚ್ಚು ಪ್ರಚಾರ ಮಾಡಿದರೆ ನಮ್ಮ ಸಂಸ್ಕೃತಿ ಬಗ್ಗೆ ತಿಳಿಯುತ್ತದೆ. ದೇವಾಲಯಕ್ಕೆ ಹೋಗುವ ಸಂಖ್ಯೆ ಕಡಿಮೆ



ಆಗಲು ನಾವು ಜಾಗೃತಿ ಮಾಡಬೇಕು ಎಂದು ಹೇಳಿದರು.

ಮನೆ ಮನೆ ಒಳಗೆ ಜಾಗೃತಿ ಮಾಡುವ ಅವಶ್ಯಕತೆ ಇದೆ. ಇಷ್ಟ ಲಿಂಗವನ್ನು ಬಸವಣ್ಣನವರು ಕೊಟ್ಟದ್ದು, ಪೂಜಾರಿ ಪೂಜೆ ಮಾಡಿದರೇ ನಿಮಗೆ ಪ್ರಯೋಜನವಿಲ್ಲ. ನಾವು ಯಾವಾಗ ಬೇಕು ಆವಾಗ ಪೂಜೆ ಮಾಡಬಹುದು. ಕರೊನಾ ಸಮಯದಲ್ಲಿ ಎಲ್ಲಾ ದೇವಾಲಯಗಳ ಬಾಗಿಲುಗಳು ಮುಚ್ಚಿದ್ದಾಗಲೂ, ಜನರ ಹೃದಯದಲ್ಲಿದ್ದ ಇಷ್ಟಲಿಂಗವೇ ತೆರೆದಿತ್ತು. ಬಸವಣ್ಣನವರ ದಾರಿ ಅದು ರಾಜ ಮತ್ತು ಸತ್ಯದ ಮಾರ್ಗವಾಗಿತ್ತು. ಸಮಾನಸಮಾಜವನ್ನು, ಸಮಾನತೆಯನ್ನು ಸ್ಥಾಪಿಸುವುದು ಬಸವಣ್ಣನವರ ಉದ್ದೇಶವಾಗಿತ್ತು. ಮನುಷ್ಯರೆಲ್ಲರೂ ಒಂದೆ ಎಂಬುದರ ಸಂದೇಶ ಕೊಡಬೇಕಾಗಿತ್ತು. ಇದರಿಂದಲೇ ಜಾತಿ ಜಾತಿ ನಡುವೆ ಸಾಮರಸ್ಯ ಸಾಧಿಸಲು ಮುಂದಾದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳು ಸ್ವಾಮೀಜಿಗಳಿಗೆ ತತ್ವಸಂಬಂಧಿ ಹಲವಾರು ಪ್ರಶ್ನೆಗಳನ್ನು ಕೇಳಿದರು. ಇಂದಿನ ಯುಗದಲ್ಲಿ ಬಸವಣ್ಣನವರ ಸಂದೇಶ ಹೇಗೆ ಪ್ರಸ್ತುತ. ಜಾತಿ ಭೇದ ನಿವಾರಣೆಗೆ ಏನು ಮಾಡಬೇಕು ಎಂಬಂತಹ ಪ್ರಶ್ನೆಗಳಿಗೆ ಸ್ವಾಮೀಜಿ ತಾಳ್ಮೆಯಿಂದ ಉತ್ತರಿಸಿ, ಸತ್ಯ ಮತ್ತು ಧರ್ಮದ ಮಾರ್ಗವೇ ಸಮಾಜಕ್ಕೆ ಬೆಳಕು ಎಂದು ತಿಳಿಸಿದರು.

### ಹಾಸನದಲ್ಲಿ ಬಸವ ಪ್ರತಿಮೆಗೆ ಚಿಂತನೆ

ಶ್ರವಣಬೆಳಗೊಳ ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಅನುಭವ ಮಂಟಪವನ್ನು 12ನೇ ಶತಮಾನದಲ್ಲಿ ದಯಪಾಲಿಸಿದವರು ಬಸವಣ್ಣ. ಈ ಪ್ರಪಂಚದ ಜನಸಂಖ್ಯೆ 850 ಕೋಟಿ ಇದ್ದು, ಅದರಲ್ಲಿ ಭಾರತದ ನಮ್ಮ ಜನಸಂಖ್ಯೆ 150 ಕೋಟಿ ಇದೆ. ಒಂದು ಗಟ್ಟಿತನದ ಪ್ರಜಾಪ್ರಭುತ್ವ ಎಂಬುದು ತಳಹದಿಗೆ ಬಸವೇಶ್ವರರ ಆಶೀರ್ವಾದ ನಮ್ಮೆಲ್ಲರಿಗೂ ಕೂಡ ಅವಕಾಶವಾಗಿದೆ. ಶ್ರೀಮಠಗಳ ಆಶೀರ್ವಾದದಿಂದ ಧರ್ಮದ ಜಾಗೃತಿ, ಸಾಮಾಜಿಕ ಪ್ರಗತಿ ಆಗಿದ್ದು, ಶೈಕ್ಷಣಿಕ ಪ್ರಗತಿಯಾಗಿ ನಮ್ಮ ದೇಶ ಅಭಿವೃದ್ಧಿ ಪಥದಲ್ಲಿ ಹೋಗುತ್ತಿದೆ ಎಂದರೇ ಇಂತಹ ಪರಮಪೂಜ್ಯರ ಆಶೀರ್ವಾದದಿಂದ ಮಾತ್ರ ಎಂದರು. ಇಂತಹ ಮಹತ್ವವಾದದ ಕಾರ್ಯಕ್ರಮದಲ್ಲಿ ಸಂವಾದ ಕಾರ್ಯಕ್ರಮ ಮಾಡುವುದರ ಮೂಲಕ ವಿದ್ಯಾರ್ಥಿಗಳಿಗೆ ಬಸವೇಶ್ವರರ ಸಂದೇಶಗಳನ್ನ ತಿಳಿಸಬೇಕಾಗಿದ್ದು, ಶ್ರೀ ಬಸವೇಶ್ವರರ ಪುತ್ಥಳಿಯನ್ನು ಹಾಸನದಲ್ಲಿ ಕೂಡ ನಿರ್ಮಾಣ ಮಾಡಲು ಶಾಸಕ ಎಚ್.ಪಿ. ಸ್ವರೂಪ್ ಕೂಡ ಚಿಂತನೆ ಮಾಡಿದ್ದು, ಮುಂದಿನ ದಿನಗಳಲ್ಲಿ ಚನ್ನರಾಯಪಟ್ಟಣದಲ್ಲೂ ಕೂಡ ಪ್ರತಿಮೆ ನಿರ್ಮಾಣ ಮಾಡಲು ಮುಂದಾಗಿ ಅನಾವರಣ ಮಾಡಲಾಗುವುದು. ರಾಜ್ಯದ ವಿವಿಧ ಜಿಲ್ಲೆಗಳಿಂದ ಸ್ವಾಮೀಜಿಗಳು ಈ ಕಾರ್ಯಕ್ರಮಕ್ಕೆ ಆಗಮಿಸಿರುವುದು ಶಕ್ತಿ ಬಂದಂತಾಗಿದೆ. ಮಹಾಲಯ ಅಮವಾಸ್ಯೆ ವಿಶೇಷ ದಿನದಂದು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶ್ವಗುರು, ಜಗಜ್ಯೋತಿ ಬಸವಣ್ಣನವರ ಸಾಂಸ್ಕೃತಿಕ ಅಭಿಯಾನ ಕಾರ್ಯಕ್ರಮದಲ್ಲಿ ಸಾವಿರಾರು ಜನರು, ವಿವಿಧ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಸಮಾಜದ ಗಣ್ಯರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ವಿದ್ಯಾರ್ಥಿಗಳಿಂದ ಕೇಳಿದ ಪ್ರತಿಯೊಂದು ಪ್ರಶ್ನೆಗೂ ಸ್ವಾಮೀಜಿಗಳಿಂದ ಬಂದ ಉತ್ತರ ಸಭಿಕರ ಮನಸ್ಸಿನಲ್ಲಿ ಸ್ಫೂರ್ತಿಯ ಅಲೆಗಳನ್ನು ಎಬ್ಬಿಸಿತು. ಇದಕ್ಕೆ ಮೊದಲು ಬಸವಣ್ಣನವರ ರಥ ಯಾತ್ರೆ ಆಗಮಿಸಿದಾಗ ಭವ್ಯ ಸ್ವಾಗತದೊಂದಿಗೆ ಬರಮಾಡಿಕೊಂಡರು.

ಶಾಸಕ ಹೆಚ್.ಪಿ. ಸ್ವರೂಪ್, ಸಾಣೇನಹಳ್ಳಿ ತರಳಬಾಳು ಜಗದ್ಗುರು ಶಾಖಾ ಮಠದ ಪಂಡಿತಾರಾಧ್ಯ ಸ್ವಾಮೀಜಿ, ಬಾಲ್ಕಿ ಹಿರೇಮಠದ ಶ್ರೀ ಬಸವಲಿಂಗ ಪಟ್ಟದೇವರು ಸ್ವಾಮೀಜಿ, ಗುರುಬಸವ ಮಹಾಸ್ವಾಮೀಜಿ, ಶಿವಾನಂದ ಸ್ವಾಮೀಜಿ, ಜ್ಞಾನಪ್ರಭು ಸಿದ್ದರಾಮ ದೇಶಿಕೇಂದ್ರ ಸ್ವಾಮೀಜಿ, ಶ್ರೀ ರುದ್ರಮುನಿ ಸ್ವಾಮೀಜಿ, ಶ್ರೀ ಸಂಗಮೇಶ್ವರ ಸ್ವಾಮೀಜಿ, ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ, ತಣ್ಣೀರುಹಳ್ಳ ಮಠದ ಶ್ರೀ ವಿಜಯಕುಮಾರ ಸ್ವಾಮೀಜಿ, ಶ್ರೀ ಜಯಚಂದ್ರಶೇಖರ ಸ್ವಾಮೀಜಿ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾದ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್, ತಾಲ್ಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಯು. ಬಸವರಾಜು, ಕುಮಾರಸ್ವಾಮಿ ಇತರರು ಉಪಸ್ಥಿತರಿದ್ದರು.


# ಜಾಗತಿಕ ವಿಜ್ಞಾನಿಗಳ ಪಟ್ಟಿಯಲ್ಲಿ ಎಂಸಿಇ ಪ್ರಾಧ್ಯಾಪಕರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದ ಸಂಶೋಧನಾ ವಿಭಾಗದ ಡೀನ್ ಡಾ. ಪಿ. ಮಧು ಹಾಗೂ ಅಸೋಸಿಯೇಟ್ ಡೀನ್ ಡಾ. ಕಿ.ಜಿ. ಯಶಸ್‌ಗೌಡ ಅವರು ವಿಶ್ವದ ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ನೆದರ್‌ಲ್ಯಾಂಡ್ ಮೂಲದ ಎಲ್ಸ್ವಿಯರ್ ಎಂಬ ಪ್ರಕಾಶನ ಸಂಸ್ಥೆಯ ಪತ್ರಿಕೆಯಲ್ಲಿ ವಿಶ್ವದ ಶೇ. 2 ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನ ಗಿಟ್ಟಿಸಿಕೊಂಡಿದ್ದಾರೆ. ಕಾಂಪೋಸಿಟ್ಸ್ ಕ್ಷೇತ್ರದಲ್ಲಿ ಸಂಶೋಧನೆ ನಡೆಸುತ್ತಿರುವ ಡಾ. ಪಿ. ಮಧು ಅವರ 110ಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳು ಅಂತಾರಾಷ್ಟ್ರೀಯ ಮನ್ನಣೆ ಪಡೆದ ಸಂಶೋಧನಾ ಪತ್ರಿಕೆಗಳಲ್ಲಿ ಪ್ರಕಟಗೊಂಡಿವೆ. ತಮ್ಮ ಸಂಶೋಧನಾ ಕ್ಷೇತ್ರಕ್ಕೆ ಸಂಬಂಧಿಸಿದ 4





ಪುಸ್ತಕ ರಚಿಸಿದ್ದಾರೆ. ಈ ಪಟ್ಟಿಯಲ್ಲಿ ಕಳೆದ ನಾಲ್ಕು ವರ್ಷಗಳಿಂದ ಸ್ಥಾನ ಪಡೆಯುತ್ತಿದ್ದಾರೆ.

ಥೈಲ್ಯಾಂಡ್‌ನ ಕಿಂಗ್ ಮಾಂಗ್ ಕುಟ್ಸ್ ತಾಂತ್ರಿಕ ವಿಶ್ವವಿದ್ಯಾಲಯದಿಂದ ಪಿಎಚ್.ಡಿ ಪದವಿ ಪಡೆದಿರುವ ಡಾ. ಕಿ.ಜಿ. ಯಶಸ್‌ಗೌಡ ಅವರು, ಪಾಲಿಮರ್ ಕಾಂಪೋಸಿಟ್ಸ್ ಕ್ಷೇತ್ರದಲ್ಲಿ ಸಂಶೋಧನೆ ನಡೆಸುತ್ತಿದ್ದಾರೆ.

ಅವರ 35 ಸಂಶೋಧನಾ ಪ್ರಬಂಧಗಳು ಅಂತಾರಾಷ್ಟ್ರೀಯ ಮನ್ನಣೆ ಪಡೆದ ಸಂಶೋಧನಾ ಪತ್ರಿಕೆಗಳಲ್ಲಿ ಪ್ರಕಟಗೊಂಡಿವೆ. 2 ಪುಸ್ತಕಗಳನ್ನು ಅವರು ಪ್ರಕಟಿಸಿದ್ದಾರೆ. ಕಳೆದ ಮೂರು ವರ್ಷಗಳಿಂದ ಈ ಪಟ್ಟಿಯಲ್ಲಿ ಸ್ಥಾನ ಭದ್ರವಾಗಿಸಿಕೊಂಡಿದ್ದಾರೆ.

# ಹಳೆಯ ವೈಷಮ್ಯದಿಂದ ವ್ಯಕ್ತಿ ಮೇಲೆ ಹಲ್ಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಹಣಕಾಸಿನ ವೈಷಮ್ಯದಿಂದ ನಾಲ್ವರು ಸೇರಿ ವ್ಯಕ್ತಿ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ಜೋಡುಗುಬ್ಬಿ ಗ್ರಾಮದಲ್ಲಿ ನಡೆದಿದೆ.

ಹಳ್ಳಿಮೈಸೂರು ಹೋಬಳಿ ಓಡನಹಳ್ಳಿ ಗ್ರಾಮದ ರೂಪೇಶ್ ಗಾಯಾಳು. ಜೋಡಿಗುಬ್ಬಿಯ ಮಂಜೇಗೌಡ, ಸುರೇಶ್, ಗಣೇಶ ಹಾಗು ಚಂದ್ರೇಗೌಡ ಎಂಬುವವರು ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.

ರೂಪೇಶ್ ಎಂಆರ್ ಸರ್ವಿಸ್ ಸ್ಟೇಷನ್ ಹೆಸರಿನಲ್ಲಿ ಪೆಟ್ರೋಲ್ ಬಂಕ್ ಹೊಂದಿದ್ದು ಅದರ ನಿರ್ವಹಣೆ ಜವಾಬ್ದಾರಿಯನ್ನು ಮಂಜೇಗೌಡರಿಗೆ ವಹಿಸಿದ್ದರು. ಆದರೆ ಹಣಕಾಸಿನ ವಿಚಾರವಾಗಿ ಇಬ್ಬರ ನಡುವೆ ವೈಮನಸ್ಸು ಏರ್ಪಟ್ಟಿತ್ತು.

ಸೆ. 18ರ ರಾತ್ರಿ 10ರ ಸಮಯದಲ್ಲಿ ರೂಪೇಶ್ ದುಮ್ಮಿಗೆ ಗ್ರಾಮಕ್ಕೆ ಕಾರಿನಲ್ಲಿ ತೆರಳುತ್ತಿದ್ದಾಗ ಮಾರ್ಗಮಧ್ಯೆ ಜೋಡಿಗುಬ್ಬಿಯಲ್ಲಿ ವಾಹನ ನಿಲ್ಲಿಸಿ ಸಿಗರೇಟ್ ತೆಗೆದುಕೊಳ್ಳಲು ಅಂಗಡಿಗೆ ತೆರಳಿದ್ದರು. ಅಲ್ಲೇ ಇದ್ದ ಮಂಜೇಗೌಡ ಏಕಾಏಕಿ ನುಗ್ಗಿಬಂದು ರೂಪೇಶ್ ಮೇಲೆ ಹಲ್ಲೆ ನಡೆಸಿದ್ದಾನೆ. ನಂತರ ಸುರೇಶ್, ಗಣೇಶ, ಚಂದ್ರೇಗೌಡ ಎಂಬುವರು ಒಟ್ಟಾಗಿ ಮಚ್ಚು, ದೊಣ್ಣೆಯಿಂದ ಮನಬಂದಂತೆ ಹಲ್ಲೆ ನಡೆಸಿದ್ದಾರೆ. ಹಳ್ಳಿಮೈಸೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಗರೆಯಲ್ಲಿ ಹಿಂದುಪರ ಕಾರ್ಯಕರ್ತರ ಪ್ರತಿಭಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಗರೆ: ಹಿಂದುಗಳ ಭಾವನೆಗೆ ಧಕ್ಕೆ ತರುವ ಹೀನ ಕೃತ್ಯ ನಡೆಯುತ್ತಿದ್ದು ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಹಿಂದುಪರ ಸಂಘಟನೆಗಳಿಂದ ಪ್ರತಿಭಟನೆ ನಡೆಸಲಾಯಿತು. ಹಗರೆ ಮುಖ್ಯ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಮಾತನಾಡಿದ ಪಿ.ಆರ್.ದಿನೇಶ್ ಅವರು, ಬೇಲೂರಿನ ದೇವಸ್ಥಾನದ ಗಣಪತಿ ವಿಗ್ರಹದ ಮೇಲೆ ಚಪ್ಪಲಿ ಇಟ್ಟು ಹೀನ ಕೃತ್ಯ ಮೆರೆದಿದ್ದಾರೆ.

ಹಿಂದು ಸಮಾಜಕ್ಕೆ ಘೋರ ಅಪಚಾರ ಮಾಡಲಾಗಿದೆ. ಹಿಂದುಗಳು ಮೌನವಾಗಿದ್ದಷ್ಟು ಒಂದಿಲ್ಲೊಂದು ದುಷ್ಕೃತ್ಯಗಳು ನಡೆಯುತ್ತಲೇ ಇರುತ್ತವೆ ಎಂದರು.

ಬಿಜೆಪಿ ಮುಖಂಡ ಡಿಶಾಂತ್ ಕುಮಾರ್ ಮಾತನಾಡಿ, ಹಿಂದು ಸಮಾಜಕ್ಕೆ ಆದ ಅಪಮಾನ, ಪೊಲೀಸರು ಚಪ್ಪಲಿ ಇಟ್ಟಿರುವ ಮಹಿಳೆ ಮಾನಸಿಕ ಅಸ್ವಸ್ಥೆ ಎಂದು ಬಿಂಬಿಸುವ ಪ್ರಯತ್ನ ಮಾಡಬಾರದು. ಅಪರಾಧಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ದಿಲೀಪ್ ಕುಮಾರ್, ಶೇಖರ್ ಗೌಡ, ಮಂಜುನಾಥ್, ಛಲವಾದಿ ಪುಟ್ಟರಾಜು, ರಘು, ಇಂತಿಯಾಸ್ ಖಾನ್, ಆನಂದ್, ಶಂಕರ್, ನವೀನ್, ಶಿವಕುಮಾರ್, ಮಹಮದ್, ರುದ್ರೇಶ್, ಆಟೋ ದೇವು, ಮದು ಇತರರಿದ್ದರು.

# ಬೇಲೂರು ಪಟ್ಟಣ ಬಂದ್‌ಗೆ ಬೆಂಬಲ

## ದೇವಾಲಯ ಶುದ್ಧೀಕರಣ | ಹಿಂದು ಕಾರ್ಯಕರ್ತರ ಶಕ್ತಿ ಪ್ರದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ಪುರಸಭೆ ಆವರಣದಲ್ಲಿರುವ ಶ್ರೀ ವರಸಿದ್ಧಿ ವಿನಾಯಕ ದೇವಾಲಯದ ಗಣೇಶಮೂರ್ತಿಗೆ ಚಪ್ಪಲಿ ಹಾಕಿ ಅವಮಾನ ಮಾಡಿದ್ದನ್ನು ಖಂಡಿಸಿ ಸೋಮವಾರ ವಿವಿಧ ಹಿಂದುಪರ ಸಂಘಟನೆಗಳು ಕರೆ ನೀಡಿದ್ದ ಪಟ್ಟಣ ಬಂದ್ ಸಂಪೂರ್ಣ ಯಶಸ್ವಿಯಾಯಿತು.

ಶ್ರೀ ಚನ್ನಕೇಶವಸ್ವಾಮಿ ದೇವಾಲಯದಿಂದ ಪ್ರತಿಭಟನಾ ಮೆರವಣಿಗೆ ನಡೆಸಿದ ನೂರಾರು ಮಂದಿ, ಬಸವೇಶ್ವರ ವೃತ್ತಕ್ಕೆ ಆಗಮಿಸಿ ಮಾನವ ಸರಪಳಿ ನಿರ್ಮಿಸಿ, ವಾಹನ ತಡೆದು ಆಕ್ರೋಶ ವ್ಯಕ್ತಪಡಿಸಿದರು. ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಸಿ ಆರೋಪಿ ಮಹಿಳೆ ಹಾಸನದ ವಿಜಯ ನಗರ ಬಡಾವಣೆಯ ಮಾನಸಿಕ ಅಸ್ವಸ್ಥೆ ಲೀಲಮ್ಮ ಹಿಂದೆ ಯಾರಿದ್ದಾರೆ ಎಂಬುದು ಬಹಿರಂಗಪಡಿಸಬೇಕೆಂದು ಒತ್ತಾಯಿಸಿದರು.

ವಾರದ ಸಂತೆ ದಿನವಾದರೂ ಬೆಳಿಗ್ಗೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪಟ್ಟಣದ ಎಲ್ಲಾ ಅಂಗಡಿಮುಗ್ಗಟ್ಟುಗಳನ್ನು ಸಂಪೂರ್ಣ ಮುಚ್ಚುವ ಮೂಲಕ ಬಂದ್‌ಗೆ ಬೆಂಬಲ ವ್ಯಕ್ತಪಡಿಸಿದರು. ಈ ವೇಳೆ ನಡೆದ ಮೆರವಣಿಗೆಯಲ್ಲಿ ಜೈ ಶ್ರೀರಾಂ ಘೋಷಣೆ ಮೊಳಗಿದವು.



ಸಾರಿಗೆ ಬಸ್, ಸೇರಿದಂತೆ ಎಲ್ಲಾ ರೀತಿಯ ವಾಹನಗಳ ಸಂಚಾರ ಎಂದಿನಂತೆ ಇದ್ದು, ಕಾಲೇಜು ತೆರೆದಿದ್ದವು.

ಶ್ರೀ ಚನ್ನಕೇಶವಸ್ವಾಮಿ ದೇವಾಲಯ ಆವರಣದಿಂದ ಮಂಗಳವಾದ್ಯ ಗಳೊಂದಿಗೆ ಕೇಸರಿ ಧ್ವಜ ಹಿಡಿದು ಮೆರವಣಿಗೆ ಹೊರಟ ನೂರಾರು ಹಿಂದೂಪರ ಸಂಘಟನೆಗಳ ಕಾರ್ಯಕರ್ತರು, ಘೋಷಣೆ ಕೂಗಿ ಘಟನೆ ಖಂಡಿಸಿದರು.

ಬಸವೇಶ್ವರ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಪೊಲೀಸರು ಈಗಾಗಲೇ ಆರೋಪಿಯನ್ನು ಬಂಧಿಸಿದ್ದು ಆಕೆಯನ್ನು ಮಾನಸಿಕ ಅಸ್ವಸ್ಥೆ ಎಂದು ಹೇಳುತ್ತಿದ್ದಾರೆ. ಆದರೆ ಘಟನೆ ನಡೆದಿರುವುದನ್ನು ಗಮನಿಸಿದರೆ ಆಕೆಯ ಕೈಯಲ್ಲಿ ಯಾರೋ ಕಿಡಿಗೇಡಿಗಳ ಈ ಕೃತ್ಯ ಮಾಡಿಸಿದ್ದಾರೆ.

ಈ ಬಗ್ಗೆ ತನಿಖೆ ನಡೆಸಿ ಪ್ರಕರಣದ ಹಿಂದೆ ಇರುವ ಕಾಣದ ಕೈಗಳನ್ನು ಬಂಧಿಸಬೇಕು. ಮುಂದೆ ಇಂತಹ ಘಟನೆಗಳು ಮರುಕಳುಹಿಸದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ದೇವಾಲಯ ಸ್ವಚ್ಛ ಕಾರ್ಯ: ಬೆಳಿಗ್ಗೆ ದೇವಾಲಯ ಹಾಗೂ ಗಣೇಶಮೂರ್ತಿಯನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ ರಂಗೋಲಿ ಬಿಡಿಸಿದರು. ನಂತರ ಶಾಸಕ ಎಚ್.ಕೆ.ಸುರೇಶ್ ನೇತೃತ್ವದಲ್ಲಿ ದೇಗುಲ ಶುದ್ಧಿ ಕಾರ್ಯ ನಡೆಸಲಾಯಿತು.

ಗಣೇಶಮೂರ್ತಿಗೆ ಹಾಲು, ಮೊಸರು, ತುಪ್ಪ, ಹಣ್ಣುಗಳಿಂದ ಅಭಿಷೇಕ ಮಾಡಲಾಯಿತು. ಬಳಿಕ ದೇಗುಲದ ಮುಂಭಾಗ ಶ್ರೀಗಂಧ, ತುಪ್ಪ, ಪಂಚಾಮೃತ, ಹೂವು, 9 ತರಹದ ಮರದ ಕಟ್ಟಿಗೆ, ನವಧಾನ್ಯ, ತುಪ್ಪ ಹಾಗೂ ಇತರೆ ಪದಾರ್ಥಗಳನ್ನು ಹಾಕಿ ಹೋಮ ಮಾಡಿ ಧಾರ್ಮಿಕ ವಿಧಿ ವಿಧಾನಗಳಂತೆ ದೇಗುಲ ಶುದ್ಧಿ ಕಾರ್ಯ ಮಾಡಲಾಯಿತು.


# ಲೇಖಕಿಯರ ಬಳಗದಿಂದ ತಿಂಗಳ ತಿರುಳು ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಲೇಖಕಿಯರ ಬಳಗದ ಸೆಪ್ಟೆಂಬರ್ ತಿಂಗಳ ತಿರುಳು ಕಾರ್ಯಕ್ರಮ ನಗರದ ಕೆಂಪು ಚೆಲುವಾಜಮ್ಮಣ್ಣಿ ಮಹಿಳಾ ಸಮಾಜದಲ್ಲಿ ರಾಜೇಶ್ವರಿ ಹುಲ್ಲೇನಹಳ್ಳಿ ಅವರ ಅಧ್ಯಕ್ಷತೆಯಲ್ಲಿ ನೆರವೇರಿತು.

ಲೇಖಕಿ ಸುಮಾ ರಮೇಶ್ ಅವರು ಲಲಿತ ಪ್ರಬಂಧಗಳ ಕುರಿತು ಉಪನ್ಯಾಸ ನೀಡಿ, ಲಲಿತ ಪ್ರಬಂಧಗಳ ಮೂಲ, ಅದು ನಡೆದು ಬಂದ ಹಾದಿ, ಅದರಲ್ಲಿ ಅಡಕವಾಗಿರಬೇಕಾದಂಥ ವಿಷಯಗಳನ್ನು ಪ್ರಸ್ತಾಪಿಸಿದರು.

ಸಾಹಿತ್ಯದ ಎಲ್ಲಾ ಪ್ರಕಾರಗಳಿಗೂ ಅದರದ್ದೇ ಆದಂತಹ ವಿಶೇಷತೆ ಇದೆ. ಲಲಿತ ಪ್ರಬಂಧಗಳು ಉಳಿದ ಎಲ್ಲಾ ಪ್ರಕಾರಗಳಿಗಿಂತ ಭಿನ್ನವಾಗುವುದು ಅದರ ಭಾಷೆ ಹಾಗೂ ಭಾವಗಳ ಲಾಲಿತ್ಯದಿಂದ. ಹಾಸ್ಯದೊಂದಿಗೆ ರೂಪಕ ಗುಣ, ವ್ಯಾಖ್ಯಾನ ಚಮತ್ಕಾರಗಳಂತಹ ಸಂಕೀರ್ಣ ಭಾವಗಳ ಮಿಶ್ರಣವನ್ನು ಬಯಸುವ ಒಂದು




ಉಲ್ಲಾಸಕಾರಿಯಾದ ಮನೋದ್ರವ್ಯವಿದು. ಹಾಗಾಗಿ ನಿರೂಪಣಾ ಶೈಲಿ ತನ್ನ ಒನಪು, ಹೊಳಪು ಕಳೆದುಕೊಳ್ಳದ ಹಾಗೆ ನಿಭಾಯಿಸುವ ಚಾಕಚಕ್ಯತೆ ಲಲಿತ ಪ್ರಬಂಧಕಾರನಿಗೆ ಇರಬೇಕಾಗುವುದು. ಪ್ರಬಂಧಕಾರನ ಅಧ್ಯಯನ, ಜೀವನಾನುಭವ, ಸ್ವಾರಸ್ಯಕರವಾಗಿ ಹರಟುವ ಮನೋಭೂಮಿಕೆಗಳು ಗಟ್ಟಿಯಾಗಿದ್ದಾಗ ಮಾತ್ರ ಇದು ಸಾಧ್ಯ ಎಂದು ಹೇಳಿದರು.

ಲೇಖಕರಾದ ಶೈಲಜಾ ಹಾಸನ, ಭಾರತಿ, ಗಿರಿಜಾ, ಸೌಮ್ಯ ಪ್ರಸಾದ್, ಗಿರಿಜಾ ನಿರ್ವಾಣಿ ಇತರರಿದ್ದರು.

# ಅ.7 ರಂದು ಮಹರ್ಷಿ ವಾಲ್ಮೀಕಿ ಜಯಂತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅ.7 ರಂದು ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಮಂಜುನಾಥ್ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯ ನ್ಯಾಯಾಲಯದ ಸಭಾಂಗಣದಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಅಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ಮೆರವಣಿಗೆ ಆಯೋಜಿಸಬೇಕು. ಬೆಳಿಗ್ಗೆ 11 ಗಂಟೆಗೆ ನಗರದ ಅಂಬೇಡ್ಕರ್ ಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಸಲಾಗುವುದು. ಅರಕಲಗೂಡಿನ ನಾಗೇಂದ್ರ ಅವರನ್ನು ಉಪನ್ಯಾಸಕರಾಗಿ ಆಹ್ವಾನಿಸಬೇಕು ಎಂದರು. ಮೆರವಣಿಗೆಯಲ್ಲಿ ಕಲಾತಂಡಗಳೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವಂತೆ ಕೋರಿದರು. ಕಡ್ಡಾಯವಾಗಿ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಬೇಕು ಎಂದು ತಿಳಿಸಿದರು.

# ಗೂಡ್ಸ್ ವಾಹನಕ್ಕೆ ಬೈಕ್ ಡಿಕ್ಕಿ: ವೃದ್ಧ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಟಾಟಾ ಏಸ್ ವಾಹನ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಪಟ್ಟಣದ ಅಗ್ನಿಶಾಮಕ ಕಚೇರಿ ಸಮೀಪ ನಡೆದಿದೆ.

ತಾಲ್ಲೂಕಿನ ಸಂಕನಹಳ್ಳಿ ಗ್ರಾಮದ ರಂಗೇಗೌಡ (71) ಮೃತರು. ಪಟ್ಟಣದಿಂದ ಬೈಕ್‌ನಲ್ಲಿ ಊರಿಗೆ ತೆರಳುತ್ತಿದ್ದಾಗ ರಸ್ತೆ ಮಧ್ಯೆ ನಿಲ್ಲಿಸಿದ್ದ ಗೂಡ್ಸ್ ವಾಹನಕ್ಕೆ ಡಿಕ್ಕಿಯಾಗಿದೆ. ವಾಹನ ಚಾಲಕ ಸಂಚಾರಿ ನಿಯಮ ಪಾಲಿಸದೆ ಹಾಗೂ ಇಂಡಿಕೇಟರ್ ಹಾಕದೇ ನಿರ್ಲಕ್ಷ್ಯದಿಂದ ರಸ್ತೆ ಮಧ್ಯೆಯೇ ನಿಲ್ಲಿಸಿದ್ದ. ವೇಗವಾಗಿ ಬೈಕ್‌ನಲ್ಲಿ ಬಂದ ರಂಗೇಗೌಡ ಅವರು ಡಿಕ್ಕಿ ಮಾಡಿದ್ದರಿಂದ ನೆಲಕ್ಕೆ ಬಿದ್ದು ಗಂಭೀರ ಗಾಯಗೊಂಡಿದ್ದರು. ಗಂಭೀರ ಗಾಯಗೊಂಡಿದ್ದ ಅವರನ್ನು ಬೆಂಗಳೂರಿನ ನಿಮಾನ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಯುವ ಸಂಸತ್ ಸ್ಪರ್ಧೆ ರಾಜ್ಯ ಮಟ್ಟಕ್ಕೆ ಆಯ್ಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಗರೆ: ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಹಗರೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ಎಸ್. ಪ್ರಮೋದ್ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಸಂಸದೀಯ ವ್ಯವಹಾರಗಳ ಇಲಾಖೆ ಮತ್ತು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಮತ್ತು ರಾಜ್ಯಶಾಸ್ತ್ರ ವೇದಿಕೆ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಯುವ ಸಂಸತ್ ಅಧಿವೇಶನ ಸ್ಪರ್ಧೆ ಏರ್ಪಡಿಸಲಾಗಿತ್ತು. ಹಗರೆ ಪದವಿ ಪೂರ್ವ ಕಾಲೇಜಿನ ದ್ವಿತಿಯ ಪಿಯುಸಿ ವಿದ್ಯಾರ್ಥಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾದರೆ, ಪ್ರಥಮ ಪಿಯುಸಿ ವಿದ್ಯಾರ್ಥಿನಿ ಸೌಮ್ಯ ತೃತಿಯ ಸ್ಥಾನ ಪಡೆದರು.

ಹಗರೆ ಕಾಲೇಜು ಪ್ರಾಂಶುಪಾಲೆ ಸಿ.ಆರ್. ಆಶಾಕುಮಾರಿ ಮಾತನಾಡಿ, ನಮ್ಮ ವಿದ್ಯಾರ್ಥಿಗಳ ಬಗ್ಗೆ ನಮಗೆ ಹೆಮ್ಮೆಯಾಗುತ್ತದೆ. ಕಳೆದ ವರ್ಷವೂ ಸಹ ನಮ್ಮ ಮಕ್ಕಳು ರಾಜ್ಯ ಮಟ್ಟದಲ್ಲಿ ಸ್ಪರ್ಧಿಸಿ ಬಹುಮಾನ ಗೆದ್ದಿದ್ದರೂ ಈ ವರ್ಷ ಸಹ ರಾಜ್ಯ ಮಟ್ಟದಲ್ಲಿ ನಮ್ಮ ಶಾಲೆಗೆ ಕೀರ್ತಿ ತರಲಿ ಎಂದು ಆಶಿಸುತ್ತೇನೆ ಎಂದರು.

ಉಪನ್ಯಾಸಕರಾದ ಎಚ್.ಬಿ. ಷಣ್ಮುಖ, ಕೃಷ್ಣಮೂರ್ತಿ, ಜಗದೀಶ್, ರಾಜೇಶ್, ಲಕ್ಷ್ಮೀಶ್, ಸಂಧ್ಯಾರಾಣಿ, ಷಣ್ಮುಖ ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-23

1122: ಪೋಪ್ ಕಲ್ಲಿಕ್ಸ್ಟಸ್ 2 ಮತ್ತು ಹೋಲಿ ರೋಮನ್ಸರರ್ ಹೆನ್ರೀ 5 ಉತ್ಕೋಟಗಾಲ ನಿರ್ಣಯ ಒಪ್ಪಿಗೆಗೊಳಿಸಿದರು.

1803: ಭಾರತದಲ್ಲಿ ಬ್ರಿಟಿಷರ ವಿರುದ್ಧ ಮತ್ತು ಮಾರಾಠಾ ಸಾಮ್ರಾಜ್ಯಗಳ ನಡುವೆ ಯುದ್ಧ ನಡೆಯಿತು.

1846: ಖಗೋಳಶಾಸ್ತ್ರಜ್ಞ ಜೋಹಾನ್ ಗೊಟ್‌ಫ್ರೆಯ್ಡ್ ಗ್ಯಾಲೆ ಮೊದಲ ಬಾರಿ ಗ್ರಹ ನೆಪ್ಚೂನ್ ಅನ್ನು ವೀಕ್ಷಿಸಿದರು.

1889 : ನೆತಾಂಡೋ ಕಂಪನಿಯ ಸ್ಥಾಪನೆ.

1932: ಹೇಜಾಜ್ ಮತ್ತು ನೆಜ್ಡ್ ರಾಜ್ಯಗಳನ್ನು ಒಗ್ಗಟ್ಟಿಗೆ ತಂದು 'ಸೌದಿ ಅರೇಬಿಯ ರಾಜ್ಯ' ಸ್ಥಾಪನೆಗೊಂಡಿತು.

### ಜನನ

1926: Bruce Springsteen , ಅಮೆರಿಕದ ಜನಪ್ರಿಯ ಗಾಯಕ ಮತ್ತು ಗಾಯಕ

1930: ರಾಯ್ ಚಾರ್ಲ್ಸ್

1926: John Coltrane, ಗಣ್ಯ ಶ್ರೀಮಂತ ಜ್ಯಾಜ್ ಸಂಗೀತಕಾರ

# 4 ಲಕ್ಷ ರೂ. ಲಾಭದಲ್ಲಿ ವೀರಶೈವ ಲಿಂಗಾಯತ ಸೌಹಾರ್ದ ಸಂಘ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ವೀರಶೈವ ಲಿಂಗಾಯತ ಜನೋಪಯೋಗಿ ಸೌಹಾರ್ದ ಸಹಕಾರಿ ಸಂಘ 2024-25ನೇ ಸಾಲಿಗೆ 4 ಲಕ್ಷ ರೂ. ನಿವ್ವಳ ಲಾಭ ಗಳಿಸಿ ಗ್ರಾಹಕರಿಗೆ ಉತ್ತಮ ಸೇವೆ ನೀಡುತ್ತಿದೆ ಎಂದು ಸಂಘದ ಅಧ್ಯಕ್ಷ ಎನ್. ರವಿಕುಮಾರ್ ತಿಳಿಸಿದರು.

ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ವೀರಶೈವ ಲಿಂಗಾಯತ ಜನೋಪಯೋಗಿ ಸೌಹಾರ್ದ ಸಹಕಾರಿ ಸಂಘದ 2024-25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಹಕರಿಗೆ ವಿವಿಧ ಉದ್ದೇಶಗಳಿಗಾಗಿ ಸಂಘವು 100 ಕೋಟಿ ರೂ ಸಾಲ ನೀಡಿದೆ. ಗ್ರಾಹಕರ ಅನುಕೂಲಕ್ಕಾಗಿ ಎಲ್ಲ ರೀತಿಯ



ಸೌಲಭ್ಯಗಳನ್ನು ಒದಗಿಸಿದ್ದು ಮುಂದಿನ ದಿನಗಳಲ್ಲಿಯೂ ಉತ್ತಮ ಸೇವೆ ನೀಡುವ ಉದ್ದೇಶ ಹೊಂದಿದೆ. ಸಂಘದ ಉನ್ನತಿಗೆ ಗ್ರಾಹಕರು ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಪಟ್ಟಣದ ಮಲ್ಲಿಪಟ್ಟಣ ರಸ್ತೆಯಲ್ಲಿ ಸ್ಥಾಪಿಸಿರುವ ಕಚೇರಿ ಹಾಗೂ ಸಿಎಸ್‌ಸಿ ಕೇಂದ್ರವನ್ನು ಸೆ. 26ರಂದು ಉದ್ಘಾಟಿಸಲಾಗುವುದು ಎಂದರು.

ರಾಜ್ಯ ಸೌಹಾರ್ದ ಅಭಿವೃದ್ಧಿ ಸಹಕಾರ ಸಂಘದ ಅಧ್ಯಕ್ಷ ಅಶೋಕ್ ಮಾತನಾಡಿ, ರಾಜ್ಯದಲ್ಲಿ 6 ಸಾವಿರ ಸೌಹಾರ್ದ ಸಹಕಾರಿ ಸಂಘಗಳಿದ್ದು ಗ್ರಾಹಕರಿಗೆ ಉತ್ತಮ ರೀತಿಯ ಸೇವೆ ನೀಡುತ್ತಿವೆ. ಇಲ್ಲಿಯ ಸಂಘದ ಕಾರ್ಯನಿರ್ವಹಣೆ ಉತ್ತಮವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವೀರಶೈವ ಲಿಂಗಾಯತ ಜನೋಪಯೋಗಿ ಸೌಹಾರ್ದ ಸಹಕಾರಿ ಸಂಘದ ಕಾರ್ಯದರ್ಶಿ ಶಶಿಕಲಾ ಆಯವ್ಯಯ ಮಂಡಿಸಿದರು. ಹೊಳೆನರಸೀಪುರ ಶಿವಕುಮಾರ ಸ್ವಾಮೀಜಿ ಸಹಕಾರಿ ಸಂಘದ ಅಧ್ಯಕ್ಷ ಸುರೇಶ್, ವೀರಶೈವ ಲಿಂಗಾಯತ ಜನೋಪಯೋಗಿ ಸೌಹಾರ್ದ ಸಹಕಾರಿ ಸಂಘದ ನಿರ್ದೇಶಕರಾದ ಯೋಗೇಶ್, ರುದ್ರಪ್ಪ, ಧರ್ಮ, ಮಹಾದೇವು, ವಿರೂಪಾಕ್ಷ, ಸುಂದರೇಶ್, ಹೇಮಲತಾ, ಸುನಿತಾ ಲೋಕೇಶ್, ವಾಗೀಶ್, ಬಿ.ಪಿ. ವೀರೇಶ್ ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248